## ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆ: 1256/2021**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ
ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ ಃ ಎ1. ಶ್ರೀನಿವಾಸ
ಬಿನ್ ಲೇಟ್ ಸ್ವಾಮಿಗೌಡ
ಸುಮಾರು 19 ವರ್ಷ ವಯಸ್ಸು,
ವಾಸಃ ಸಿಂಗರಮಾರನಹಳ್ಳಿ ಗ್ರಾಮ,
ಹುಣಸೂರು ತಾಲ್ಲೂಕು,
ಮೈಸೂರು ಜಿಲ್ಲೆ.

### ದೋಷಾರೋಪಣೆ

ಶ್ರೀಮತಿ ಪೂಜಾ ಬೆಳಕೇರಿ, ಅಪರ ಸಿವಿಲ್ ನ್ಯಾಯಾಧೀಶರು ಹಾಗೂ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ಹುಣಸೂರು ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿಃ 05.06.2021 ರಂದು ಬೆಳಿಗ್ಗೆ 11.00 ಗಂಟೆ ಸಮಯದಲ್ಲಿ ಬಿಳಿಕೆರೆ ಪೋಲೀಸ್ ಠಾಣಾ ಸರಹದ್ದಿಗೆ ಸೇರಿದ ಸಿಂಗರಮಾರನಹಳ್ಳಿ ಗ್ರಾಮದಲ್ಲಿ ಸಾಕ್ಷಿ 1 ಅವರು ತನ್ನ ಮನೆಯಲ್ಲಿದ್ದಾಗ ಆರೋಪಿಯಾದ ನೀವು ಅಪರಾಧ ಮಾಡುವ ಉದ್ದೇಶವುಳ್ಳವರಾಗಿ, ಸಾಕ್ಷಿ-1 ಅವರ ಮನೆಗೆ ಅತಿಕ್ರಮ ಪ್ರವೇಶ ಮಾಡಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 448 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

2. ಎರಡನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಅಪರಾಧ ಮಾಡುವ ಉದ್ದೇಶವುಳ್ಳವರಾಗಿ, ಸಾಕ್ಷಿ 1 ಅವರಿಗೆ ಏನೇ ಸೂಳೆ ಮುಂಡೆ ಹುಡುಗರನ್ನು ಬಿಟ್ಟು ನನಗೆ ಹೊಡೆಸುತ್ತೀನಿ ಅಂತ ಹೇಳುತ್ತೀಯಾ ಎಂದು ಅವಾಚ್ಯ ಶಬ್ದಗಳಿಂದ ಬೈದಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 504 ರ ರೀತ್ಯಾದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

3. ಮೂರನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಅಪರಾಧ ಮಾಡುವ ಉದ್ದೇಶವುಳ್ಳವರಾಗಿ, ಸಾಕ್ಷಿ 1 ಅವರನ್ನು ಮುಂದೆ ಹೋಗದಂತೆ ಅಕ್ರಮ ತಡೆಯುಂಟುಮಾಡಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 341 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

4. ನಾಲ್ಕನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಅಪರಾಧ ಮಾಡುವ ಉದ್ದೇಶವುಳ್ಳವರಾಗಿ, ಸಾಕ್ಷಿ 1 ಅವರ ಎರಡೂ ಕೈಗಳನ್ನು ನುಲುಚಿದ್ದರಿಂದ ಅವರ ಬಲಗೈನ ಮಧ್ಯದ ಬೆರಳು ಮತ್ತು ಎಡಗೈನ ಮುಂಗೈಗೆ ಸಾಮಾನ್ಯ ಸ್ವರೂಪದ ನೋವುಂಟುಮಾಡಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 323 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

5. ಐದನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಅಪರಾಧ ಮಾಡುವ ಉದ್ದೇಶವುಳ್ಳವರಾಗಿ,

ಸಾಕ್ಷಿ- 1 ಅವರನ್ನು ಮನೆಯಿಂದ ಹೊರಕ್ಕೆ ಎಳೆದುಕೊಂಡು ಬರಲು ಪ್ರಯತ್ನಿಸಿ ನಂತರ ಸಾಕ್ಷಿ 1 ಅವರ ಬಲಗೈನ ಮಧ್ಯದ ಬೆರಳನ್ನು ಹಲ್ಲಿನಿಂದ ಕಚ್ಚಿ ಸಾಮಾನ್ಯ ಸ್ವರೂಪದ ನೋವುಂಟುಮಾಡಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 324 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

6. ಕೊನೆಯದಾಗಿ, ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ ಅದೇ ವಿಚಾರಕ್ಕೆ ಸಂಬಂಧಪಟ್ಟಂತೆ, ಆರೋಪಿಯಾದ ನೀವು ಅಪರಾಧ ಮಾಡುವ ಉದ್ದೇಶವುಳ್ಳವರಾಗಿ, ಸಾಕ್ಷಿ- 1 ಅವರ ನೈಟಿಯನ್ನು ಹರಿದು ಹಾಕಿ ಅಪಮಾನ ಮಾಡಿ ಮಹಿಳೆಯ ಮಾನಕ್ಕೆ ಕುಂದು ಬರುವಂತೆ ಅಪಮಾನ ಪಡಿಸಿರುತ್ತೀರೆಂದು, ಆ ಮೂಲಕ ಭಾರತೀಯ ದಂಡ ಸಂಹಿತೆ ಕಲಂ 354 ರ ರೀತ್ಯಾ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯೊಳಗೆ ಎಸಗಿರುತ್ತೀರಿ?

(ಮೇಲ್ಕಂಡ ಆರೋಪಣೆಯು ಈ ನ್ಯಾಯಾಲಯದ ಸಂಜ್ಞೆಯೊಳಗೆ ಬರುತ್ತಿದ್ದು ಹಾಗೂ ಸದರಿ ಆರೋಪಣೆಗಳಿಗೆ ಆರೋಪಿಯಾದ ನೀವು ಈ ನ್ಯಾಯಾಲಯದಲ್ಲಿ ವಿಚಾರಣೆಗೆ ಗುರಿಯಾಗಬೇಕೆಂದು ಈ ಮೂಲಕ ನಿರ್ದೇಶಿಸುತ್ತೇನೆ.)

**(ಪೂಜಾ ಬೆಳಕೇರಿ)**

ದಿನಾಂಕಃ **20.09.2023**

ಹೆಚ್ಚುವರಿ ದಿವಾಣಿ ನ್ಯಾಯಾಧೀಶರು ಮತ್ತು
**ಪ್ರ.ದ.ನ್ಯಾ.ದಂಡಾಧಿಕಾರಿಗಳು, ಹುಣಸೂರು.**

## ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ, ಹುಣಸೂರು.

**ಸಿ.ಸಿ. ಸಂಖ್ಯೆಃ 1256/2021**

ಫಿರ್ಯಾದಿದಾರರುಃ ಸರ್ಕಾರದ ಪರ ಬಿಳಿಕೆರೆ ಪೊಲೀಸ್ ಠಾಣೆ ಹುಣಸೂರು ವೃತ್ತ, ಹುಣಸೂರು.

ವಿರುದ್ಧ,

ಆರೋಪಿ ಃ ಎ 1. ಶ್ರೀನಿವಾಸ ಬಿನ್ ಲೇಟ್ ಸ್ವಾಮಿಗೌಡ

ಭಾರತೀಯ ದಂಡ ಸಂಹಿತೆ ಕಲಂ **240(2)** ರ ಅಡಿಯಲ್ಲಿ ಆರೋಪಿಯ ಹೇಳಿಕೆ

ಪ್ರಶ್ನೆಃ ನಿಮಗೆ ಈಗ ಓದಿ ಹೇಳಿದ ದೋಷಾರೋಪಣೆ ತಿಳಿಯಿತೆ**?**

ಉತ್ತರಃ

ಪ್ರಶ್ನೆಃ ತಪ್ಪೊಪ್ಪಿಕೊಳ್ಳುವಿರೋ, ವಿಚಾರಣೆಯಾಗಬೇಕೆನ್ನುವಿರೋ**?**

ಉತ್ತರಃ

ಮೇಲ್ಕಂಡ ದೋಷಾರೋಪಣೆಯನ್ನು ತೆರೆದ ನ್ಯಾಯಾಲಯದಲ್ಲಿ ಓದಿ ಹೇಳಿದ್ದು, ಆರೋಪಿಯು ನೀಡಿದ ಉತ್ತರವನ್ನು ಹಾಗೆಯೇ ದಾಖಲಿಸಿಕೊಂಡಿದೆಯೆಂದು ಈ ಮೂಲಕ ದೃಢೀಕರಿಸುತ್ತೇನೆ.

(ಪೂಜಾ ಬೆಳಕೇರಿ)
ಅಪರ ಸಿವಿಲ್ ನ್ಯಾಯಾಧೀಶರು ಹಾಗೂ
ಪ್ರ.ದಂ.ನ್ಯಾ.. ದಂಡಾಧಿಕಾರಿಗಳು, ಹುಣಸೂರು.

ದಿನಾಂಕಃ **20.09.2023**